



ಅರುಣ ಪಿ. ಭಟ್ಟ

## ವಾರಭವಿಷ್ಯ: 21.11.2024ರಿಂದ 27.11.2024ರವರೆಗೆ




ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ ಕಾಲ. ಉದ್ಯೋಗದಲ್ಲಿ ಅದ್ಭುತ ಯಶಸ್ಸು. ಹೊಸದಾಗಿ ಕೆಲಸಕ್ಕಾಗಿ ಸಂದರ್ಶನಗಳಿಗೆ ತೆರಳಿದರೆ ಸಕಾರಾತ್ಮಕ ಫಲಿತಾಂಶ ದೊರೆಯುವ ಸಾಧ್ಯತೆ. ಮಕ್ಕಳ ಬಗ್ಗೆ ನಿಮ್ಮ ಗಮನ ಹಾಗೂ ಅವರ ಪರಿಸರವನ್ನು ನೀವು ಉತ್ತಮವಾಗಿಟ್ಟುಕೊಳ್ಳುವ ಮನಸ್ಥಿತಿಯನ್ನು ರೂಪಿಸುವುದು ಒಳ್ಳೆಯದು. ಶುಭದಿನ 22. ಗೋಪೂಜೆ ಮಾಡಿರಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಆದಾಯ ವೃದ್ಧಿಯಾಗಲಿದೆ. ನೀವು ಒಬ್ಬರಿಗೆ ಒಳ್ಳೆಯದು ಬಯಸಿದರೆ ಅದು ಅಪಾರ್ಥದಂತೆ ಕಾಣಿಸಬಹುದು. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ಕುಟುಂಬದಲ್ಲಿ ಸಂತೋಷವಾಗಿ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ಶುಭದಿನ 21. ಹನುಮಾನ್ ಚಾಲೀಸ್ ಪಠಿಸಿರಿ.




ಈ ವಾರದ ಮೊದಲಾರ್ಧ ಅನುಕೂಲಕರವಾಗಿದೆ. ಈ ಅವಧಿಯಲ್ಲಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ನಿಮ್ಮ ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳಿಂದ ಬೇಸರ ಆಗಲಿದೆ. ಶುಭದಿನ 23. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಮಾಡುವ ಕಾರ್ಯದಲ್ಲಿ ಅನಗತ್ಯವಾಗಿ ತೊಂದರೆ ಬರಬಹುದಾಗಿದೆ. ಸಮಸ್ಯೆಗಳಿಗೆ ಪರಿಹಾರ ಹುಡುಕುವುದು ಒಳಿತು. ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಇದೆ. ಹೂಡಿಕೆ, ಸಂಪತ್ತು ವಿಸ್ತರಣೆ ಹಾಗೂ ವಿದೇಶಿ ವ್ಯವಹಾರದಲ್ಲಿ ನೀವಂದುಕೊಂಡಂತಹ ಫಲಿತಾಂಶ ದೊರೆಯಲಿದೆ. ಆರ್ಥಿಕ ಸ್ಥಿತಿ ಸಾಧಾರಣ ಎಂಬುದಕ್ಕಿಂತ ಸ್ವಲ್ಪ ಉತ್ತಮವಾಗಿರುತ್ತದೆ. ಶುಭದಿನ. 22. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವೇಚನಾರಹಿತ ಹೂಡಿಕೆಗಳಿಂದ ಧನ ನಷ್ಟ ಸಂಭವ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಗಿ ಕಾಣಬಹುದು. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲ ಆಗಲಿದೆ. ಉತ್ಸಾಹ ಮಾಮೂಲಿಗಿಂತ ಹೆಚ್ಚಾಗಿರುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ಶುಭದಿನ. 24. ವಿಷ್ಣು ಸಹಸ್ರನಾಮ ಓದಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬದಿಂದ ನಿಮ್ಮ ಬಗ್ಗೆ ಹಲವರು ಮಾತನಾಡುವರು. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ. ವ್ಯಾಪಾರ ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಹಣಕಾಸು ಹೂಡಿಕೆಗೆ ಸಂಬಂಧಿಸಿದಂತೆ ನಿಮಗೆ ಅನುಕೂಲ ಆಗಲಿದೆ. ಶುಭದಿನ. 25. ನವದುರ್ಗಾ ಆರಾಧನೆ ಮಾಡಿರಿ.




ಹಿರಿಯರ ಬಗ್ಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಆರ್ಥಿಕ ಗಳಿಕೆ ಇದ್ದರು ಸಹ ಕೆಲವೊಂದು ವಿಷಯಗಳಲ್ಲಿ ನಿಮ್ಮ ದುಡುಕುತನ ದೊಡ್ಡ ಪೆಟ್ಟನ್ನು ನೀಡಬಹುದಾಗಿದೆ. ಮನಸ್ಸು ಮರ್ಕಟವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತದೆ. ಶುಭದಿನ 26. ಆದಿತ್ಯ ಹೃದಯ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಲ್ಲಿ ಹೋಗದಿರುವುದು ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನ ಕಂಡುಬರುತ್ತಾರೆ. ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಕಾರ್ಯಕ್ರಮ ಆಯೋಜಿಸುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 23. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಹೆಚ್ಚು ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಆಸ್ತಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಉದ್ವೇಗ ಇದ್ದೇ ಇರುತ್ತದೆ. ಶುಭದಿನ. 24. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ಹೊಸ ಯೋಜನೆಗೆ ಈಗಿನಿಂದಲೇ ಸಿದ್ಧತೆ ನಡೆಸುವುದು ಒಳ್ಳೆಯದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮವಾದ ಬೆಳವಣಿಗೆ ಕಂಡುಬರುತ್ತದೆ. ಆರ್ಥಿಕ ಸಹಕಾರಕ್ಕಾಗಿ ಆತ್ಮೀಯರ ಬಳಿ ಕೇಳುವ ಸಾಧ್ಯತೆ ಇದೆ. ವಾರದ ಶುರುವಿನಲ್ಲಿ ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಕಾನೂನು ವ್ಯವಹಾರಗಳು ನಿಮಗೆ ಅನುಕೂಲಕರವಾಗಿ ಇವೆ. ಶುಭದಿನ 22. ಕಾಲಭೈರವನ ಸೇವೆ ಮಾಡಿರಿ.




ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿಯಿಂದ ಹೊರಬರುವ ಪ್ರಯತ್ನ ಮೆಚ್ಚುವಂಥದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ. 24. ಶನಿಸ್ತೋತ್ರ ಪಠಿಸಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿದೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತವೆ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಹಣಕಾಸು ಹೂಡಿಕೆ ಲಾಭದಾಯಕವಾಗಿ ಇರುತ್ತದೆ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ 25. ಗಣಪತಿಗೆ ದೂರ್ವಾರ್ಚನೆ ಮಾಡಿರಿ.